151(179) ಶ್ರೀ ಹಾಲಪ್ಪ ಹೆಚ್. (ಹೊಸನಗರ): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ಶೆಟ್ಟಿಹಳ್ಳಿ ಅಭಯಾರಣ್ಯದ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ವಾಸವಾಗಿರುವ ಜನರಿಗೆ ಸರ್ಕಾರ ಮೂಲ ಸೌಲಭ್ಯ ಒದಗಿಸಲು ಅರಣ್ಯ ಇಲಾಖೆಯು ಅಡಚಣೆಯನ್ನುಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಚೆನ್ನಿಗಪ್ಪ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):

ಅ) ಶೆಟ್ಟಿಹಳ್ಳಿ ಅಭಯಾರಣ್ಯದ ವ್ಯಾಪ್ತಿಯಲ್ಲಿ ಇರುವ ಗ್ರಾಮಗಳಲ್ಲಿ ವಾಸವಾಗಿರುವ ಜನರಿಗೆ ಸರ್ಕಾರ ಮೂಲ ಸೌಲಭ್ಯ ಒದಗಿಸುವ ಬಗ್ಗೆ ವನ್ಯಜೀವಿ ವಿಭಾಗದಿಂದ ಯಾವುದೇ ಅಡಚಣೆಯನ್ನುಂಟು ಮಾಡಲಾಗಿಲ್ಲ. ವನ್ಯಜೀವಿ ಸಂರಕ್ಷಣಾ ಕಾಯ್ದೆ 1972 ಹಾಗೂ ಅರಣ್ಯ ಸಂರಕ್ಷಣಾ ಕಾಯ್ದೆ 1980ರ ಪ್ರಕಾರ ಅಭಯಾರಣ್ಯ ಪ್ರದೇಶಗಳಲ್ಲಿ ಅರಣ್ಯೇತರ ಚಟುವಟಿಕೆ ನಡೆಸಬೇಕಾಗಿದ್ದಲ್ಲಿ ಕೇಂದ್ರ ಸರ್ಕಾರದ ಅನುಮತಿ ಅವಶ್ಯವಾಗಿರುತ್ತದೆ.

ಆ) ಉದ್ಭವಿಸುವುದಿಲ್ಲ.

152(63) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್‌ಖಾತ್ (ಹುಬ್ಬಳ್ಳಿ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ನಗರ ವ್ಯಾಪ್ತಿಯಲ್ಲಿ ಒಂದೇ ತಹಶೀಲ್ದಾರರ ಕಛೇರಿ ಇರುವುದರಿಂದ ನಾಗರೀಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಎರಡು ಪ್ರತ್ಯೇಕ ತಹಶೀಲ್ದಾರರ ಕಛೇರಿಗಳನ್ನಾಗಿ ಬೇರ್ಪಡಿಸುವುದು ಸರ್ಕಾರದ ಗಮನದಲ್ಲಿದೆಯೇ

ಇ) ಹಾಗಿದ್ದಲ್ಲಿ, ಯಾವಾಗ ಬೇರ್ಪಡಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಲಾಗುವುದು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು):

ಅ) .....ಬಂದಿದೆ.

ಆ) ಈ ಬಗ್ಗೆ ಪರಿಶೀಲಿಸಲಾಗುತ್ತಿದೆ. ಶೀಘ್ರವಾಗಿ ತೀರ್ಮಾನ ಕೈಗೊಳ್ಳಲಾಗುವುದು.

ಇ) ಸಾರ್ವಜನಿಕ ಹಿತ ದೃಷ್ಟಿಯಿಂದ ಅದಷ್ಟು ಬೇಗ ಈ ಬಗ್ಗೆ ಕ್ರಮ ಜರುಗಿಸಲಾಗುವುದು.

153(371) ಶ್ರೀ ಐವಾನ್ ನಿಗ್ಲಿ (ನಾಮಾಂಕಿತ): ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಸಂಚರಿಸುತ್ತಿರುವ ವಾಹನಗಳಿಗೆ ಕಡ್ಡಾಯವಾಗಿ ಸಿ.ಎನ್.ಜಿಯನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೆ?

ಆ) ಹಾಗಿದ್ದಲ್ಲಿ, ಮಾಲಿನ್ಯವನ್ನು ನಿಯಂತ್ರಿಸಲು ಸರ್ಕಾರವು ತೆಗೆದುಕೊಳ್ಳುತ್ತಿರುವ ಪರ್ಯಾಯ ಕ್ರಮಗಳೇನು?

ಶ್ರೀ ಸಿ. ಚೆನ್ನಿಗಪ್ಪ (ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು):

ಅ) ಇಲ್ಲ.

ಆ) ಬೆಂಗಳೂರು ನಗರದಲ್ಲಿ ವಾಹನಗಳಿಂದ ಉಂಟಾಗುವ ವಾಯು ಮಾಲಿನ್ಯವನ್ನು ತಡೆಗಟ್ಟಲು ಈ ಕೆಳಕಂಡ ಪರ್ಯಾಯ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ:

ಬೆಂಗಳೂರು ನಗರದಲ್ಲಿ ಒಟ್ಟು 209 ತಪಾಸಣಾ ಕೇಂದ್ರಗಳು ವಾಹನಗಳ "ಮಾಲಿನ್ಯ ನಿಯಂತ್ರಣದಲ್ಲಿದೆ" ಎಂಬ ಪ್ರಮಾಣ ಪತ್ರವನ್ನು ನೀಡುತ್ತಿವೆ.

ವಾಹನಗಳು ಉಗುಳುವ ಹೊಗೆಯಿಂದುಂಟಾಗುವ ವಾಯುಮಾಲಿನ್ಯ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿಗಳಲ್ಲಿ ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಮತ್ತು ಇದನ್ನು ತಡೆಗಟ್ಟಲು ವಹಿಸಬೇಕಾದ ಮುಂಜಾಗರೂಕತೆಯ ಬಗ್ಗೆ ತಿಳುವಳಿಕೆಯನ್ನುಂಟು ಮಾಡುವ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುತ್ತಿದೆ.

ವಾಹನಗಳಲ್ಲಿ ಪೆಟ್ರೋಲ್ ಬದಲು ಪರ್ಯಾಯ ಇಂಧನವನ್ನಾಗಿ ಎಲ್.ಪಿ.ಜಿಯನ್ನು ಬಳಸಲು ಮತ್ತು ಬ್ಯಾಟರಿಚಾಲಿತ ವಾಹನಗಳ ಬಳಕೆಯನ್ನು ಸರ್ಕಾರವು ಉತ್ತೇಜಿಸುತ್ತಿದೆ. ಬ್ಯಾಟರಿಚಾಲಿತ ವಾಹನಗಳಿಗೆ ಐದು ವರ್ಷಗಳವರೆಗೆ ರಸ್ತೆ ತೆರಿಗೆ ವಿನಾಯಿತಿ ನೀಡಲಾಗಿದೆ.

ಬೆಂಗಳೂರಿನಲ್ಲಿ ಪ್ರಸ್ತುತ 25 ಎಲ್.ಪಿ.ಜಿ. ರೀ-ಫಿಲ್ಲಿಂಗ್ ಸ್ಟೇಷನ್‌ಗಳು ಕಾರ್ಯ ನಿರ್ವಹಿಸುತ್ತಿದ್ದು, ಇನ್ನೂ ಹೆಚ್ಚಿನ ರೀ-ಫಿಲ್ಲಿಂಗ್ ಸ್ಟೇಷನ್‌ಗಳನ್ನು ಪ್ರಾರಂಭಿಸುವಂತೆ ರಾಜ್ಯಮಟ್ಟದ ತೈಲ ಕಂಪೆನಿಗಳ ಸಮನ್ವಯಾಧಿಕಾರಿಯವರನ್ನು ಕೋರಲಾಗಿದೆ.

ಸಾರಿಗೆ ಇಲಾಖೆಯು ವಾಹನಗಳಿಂದುಂಟಾಗುವ ವಾಯುಮಾಲಿನ್ಯ ನಿಯಂತ್ರಣಕ್ಕಾಗಿ ವಿಶೇಷ ತಪಾಸಣೆ ನಡೆಸಿ 1-4-05 ರಿಂದ 28.02.2006 ರವರೆಗೆ 5,32,266/- ವಾಹನಗಳನ್ನು ತಪಾಸಿಸಿ, 21,224/- ಪ್ರಕರಣಗಳನ್ನು ದಾಖಲಿಸಿ ರೂ.61,16,390/-ಗಳನ್ನು ದಂಡದ ರೂಪದಲ್ಲಿ ವಸೂಲಿ ಮಾಡಲಾಗಿದೆ.

ಸಾರಿಗೆ ಇಲಾಖೆಯು ಬೆಂಗಳೂರು ನಗರದಲ್ಲಿ "ಮಾಲಿನ್ಯ ನಿಯಂತ್ರಣದಲ್ಲಿದೆ" ಪ್ರಮಾಣ ಪತ್ರವನ್ನು ಹೊಂದಿರುವ ಆದರೆ, ಗೋಚರ ಹೆಚ್ಚುವರಿ ಹೊಗೆಯನ್ನು ಬಿಡುತ್ತಿರುವ ವಾಹನಗಳ ವಿರುದ್ಧ ವಿಶೇಷ ಕಾರ್ಯಚರಣೆಯನ್ನು ಸಹ ನಡೆಸಿದೆ. ದಿನಾಂಕ 01.04.2005 ರಿಂದ 31.12.2005 ರವರೆಗಿನ ಅವಧಿಯಲ್ಲಿ 9520 ವಾಹನಗಳು ಹೆಚ್ಚುವರಿ ಹೊಗೆಯನ್ನು ಹೊರಸೂಸುವುದು ಕಂಡುಬಂದಿದ್ದು, 1294 ವಾಹನಗಳ ಅರ್ಹತಾ ಪ್ರಮಾಣ ಪತ್ರವನ್ನು ರದ್ದುಪಡಿಸಲು ಕ್ರಮ ಕೈಗೊಳ್ಳಲಾಗಿದೆ.

ಬೆಂಗಳೂರು ನಗರದಲ್ಲಿ ಪೆಟ್ರೋಲ್‌ನಿಂದ ದ್ವಿ-ಇಂಧನ ಎಲ್.ಪಿ.ಜಿ ರೀತಿಗೆ ಆಟೋರಿಕ್ಷಾಗಳನ್ನು ಹಂತ ಹಂತವಾಗಿ ಪರಿವರ್ತಿಸಲು ಕ್ರಿಯಾಯೋಜನೆ ಕಾರ್ಯಗತವಾಗುತ್ತಿದೆ. ಬೆಂಗಳೂರು ನಗರದಲ್ಲಿರುವ 70,229 ಆಟೋರಿಕ್ಷಾಗಳ ಪೈಕಿ 35,462 ಆಟೋರಿಕ್ಷಾಗಳಿಗೆ ದ್ವಿ-ಇಂಧನ ಎಲ್.ಪಿ.ಜಿ.ಕಿಟ್ ಅಳವಡಿಸಲಾಗಿದೆ. 1-4-91 ರ ನಂತರ ನೋಂದಣಿಯಾದ ಆಟೋರಿಕ್ಷಾಗಳಿಗೆ ಕಡ್ಡಾಯವಾಗಿ ಎಲ್.ಪಿ.ಜಿ ಕಿಟ್ ಅಳವಡಿಸುವ ಯೋಜನೆಯಿದ್ದು, ಅದರಂತೆ ಉಳಿದ ಆಟೋರಿಕ್ಷಾಗಳನ್ನು ಜುಲೈ 2006 ರ ಅಂತ್ಯಕ್ಕೆ ಎಲ್.ಪಿ.ಜಿ. ಗೆ ಪರಿವರ್ತಿಸುವ ಯೋಜನೆ ಇದೆ.

ಇದರ ಜೊತೆಗೆ ಬೆಂಗಳೂರು ನಗರದಲ್ಲಿ ದ್ವಿ-ಇಂಧನ ಎಲ್.ಪಿ.ಜಿ ಹೊಂದಿರುವ ಆಟೋರಿಕ್ಷಾಗಳಿಗೆ ಮಾತ್ರ ಹೊಸ ರಹದಾರಿಯನ್ನು ನೀಡಲಾಗುತ್ತಿದೆ.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಬೆಂಗಳೂರು ಐದು ಕೇಂದ್ರಗಳಲ್ಲಿ ಪರಿವೇಷ್ಯಕ ವಾಯುವಿನ ಗುಣಮಟ್ಟವನ್ನು ಮಾಪನ ಮಾಡುತ್ತಿದೆ.

ಎರಡು ಆನ್‌ಲೈನ್ ಪರಿವೇಷ್ಯಕ ವಾಯುವಿನ ಗುಣಮಟ್ಟದ ಮಾಪನ ಕೇಂದ್ರಗಳನ್ನು ಸ್ಥಾಪಿಸಲು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಸರಬರಾಜು ಆದೇಶವನ್ನು ನೀಡಲಾಗಿದೆ.

ವಾಹನಗಳಿಂದ ಹೊರಬರುವ ವಾಯುವಿನ ಮಾಪನವನ್ನು ನಡೆಸುವ ಬೇಕಾದ ಉಪಕರಣಗಳನ್ನು ಅಳವಡಿಸಿದ ಸುಸಜ್ಜಿತವಾದ 8 ಪರಿಸರ ವಾಹಿನಿ ವಾಹನಗಳನ್ನು ಸಾರಿಗೆ ಇಲಾಖೆಗೆ ನೀಡಲಾಗಿದೆ.

ಬೆಂಗಳೂರು ನಗರ ಹೊರವರ್ತುಲ ರಸ್ತೆಯ ಒಳಗಿನ ವ್ಯಾಪ್ತಿಯಲ್ಲಿರುವ ಪೆಟ್ರೋಲ್ ಬಂಕುಗಳಲ್ಲಿ ಕೇವಲ ಪ್ರೀಮಿಕ್ಸೆಡ್ 2-T ಎಣ್ಣೆಯನ್ನು ನಾಜಲ್ ಮುಖಾಂತರ ಮಾರಾಟ ಮಾಡುವಂತೆ ಸರ್ಕಾರ ಆದೇಶ ಹೊರಡಿಸಿದೆ.

ಪರಿಣಾಮಕಾರಿಯಾಗಿ ವಾಯು ಮಾಲಿನ್ಯವನ್ನು ನಿಯಂತ್ರಿಸಲು ಒಂದು ಕಾರ್ಯಪಡೆಯನ್ನು ಸರ್ಕಾರವು ರಚಿಸಿದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದ ಮೇರೆಗೆ ಸರ್ಕಾರವು ಬೆಂಗಳೂರು ನಗರದ ವಾಯು ಮಾಲಿನ್ಯವನ್ನು ನಿಯಂತ್ರಿಸಲು 14 ಅಂಶಗಳ ಒಂದು ಕ್ರಿಯಾ ಯೋಜನೆಯನ್ನು ತಯಾರಿಸಿ ಜಾರಿಗೊಳಿಸಲಾಗುತ್ತಿದೆ. ಈ ಕ್ರಿಯಾ ಯೋಜನೆಯ ಪ್ರಗತಿಯನ್ನು ಆಗಿಂದಾಗ್ಗೆ ಪರಿಶೀಲಿಸಲಾಗುತ್ತಿದೆ.

154(372) ಶ್ರೀ ಐವಾನ್ ನಿಗ್ಲಿ (ನಾಮಾಂಕಿತ): ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಗರ ಸಭೆ ಹಾಗೂ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಹಳೇ ಮದರಾಸ್ ರಸ್ತೆ ಹಾಗೂ ಇತರ ರಾಷ್ಟ್ರೀಯ ಹೆದ್ದಾರಿಗಳ ಪಕ್ಕದಲ್ಲಿ ಜನರು/ಸಂಸ್ಥೆಗಳು ಕೆಡವಿದ ಕಟ್ಟಡಗಳ ಸಾಮಗ್ರಿಗಳನ್ನು ಪೇರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೇಯೇ?

ಆ) ಹಾಗಿದ್ದಲ್ಲಿ, ವಾಯು ಮತ್ತು ಸ್ಥಳವನ್ನು ಮಾಲಿನ್ಯ ಮಾಡುತ್ತಿರುವ ಈ ಜನರ/ ಏಜೆನ್ಸಿಯ ವಿರುದ್ಧ ಸರ್ಕಾರವು ತೆಗೆದುಕೊಳ್ಳುತ್ತಿರುವ ಕ್ರಮಗಳೇನು?

ಶ್ರೀ ಸಿ. ಚೆನ್ನಿಗಪ್ಪ (ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು):

ಅ) ಹೌದು.

ಆ) ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ (ಬಿಎಮ್‌ಆರ್‌ಡಿಎ) ಮತ್ತು ಬೆಂಗಳೂರು ಮಹಾನಗರ ಪಾಲಿಕೆ ಪರಿಮಿತಿಯಲ್ಲಿ ಮುನಿಸಿಪಲ್ ಘನ ತ್ಯಾಜ್ಯ ವಸ್ತುಗಳ ಕ್ರೋಡಿಕರಣೆ, ವಿಭಜನೆ, ಸಂಗ್ರಹಣೆ ಹಾಗೂ ವಿಲೇವಾರಿ ಮಾಡುವ ಕಾರ್ಯವು ಬೆಂಗಳೂರು ಮಹಾನಗರ ಪಾಲಿಕೆ ಆಯುಕ್ತರ ಪ್ರಾಧಿಕಾರದಲ್ಲಿರುತ್ತದೆ.